ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 19–11–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಅವಿಷ್ಕಾರೋತ್ಸವ – 2015:<br><br>ಉದ್ಘಾಟನೆ:<br><br>ಎಸ್.ಆರ್. ಪಾಟೀಲ್,<br><br>ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಯೋಜನೆ ಮತ್ತು ಸಂಖ್ಯಾಶಾಸ್ತ್ರ ಸಚಿವರು.<br><br>ಮುಖ್ಯ ಅತಿಥಿಗಳು:<br><br>ಪ್ರೊ. ಹೆಚ್. ಪಿ. ಖಿಂಚ,<br><br>ಅಧ್ಯಕ್ಷರು,<br><br>ಕರ್ನಾಟಕ ಜ್ಞಾನ ಆಯೋಗ, | 20–11–2015<br><br>ಶುಕ್ರವಾರ<br><br>ಬೆಳಿಗ್ಗೆ<br><br>10–00 ಗಂಟೆಗೆ | ಸಭಾಂಗಣ, ವಿಶ್ವೇಶ್ವರಯ್ಯ ಕೈಗಾರಿಕಾ ಮತ್ತು ತಾಂತ್ರಿಕ ವಸ್ತು ಸಂಗ್ರಹಾಲಯ, ಕಸ್ತೂರಬಾ ರಸ್ತೆ, ಬೆಂಗಳೂರು. |
| 2. | ಕೃಷಿ ಮೇಳ – 2015:<br><br>ಹಸಿರು ಕ್ರಾಂತೀಯ ಸುವರ್ಣ ಮಹೋತ್ಸವ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭ:<br><br>ಉದ್ಘಾಟನೆ:<br><br>ಸಿದ್ದರಾಮಯ್ಯ, | 20–11–2015<br><br>ಶುಕ್ರವಾರ<br><br>ಬೆಳಿಗ್ಗೆ<br><br>11–30 ಗಂಟೆಗೆ | ಗಾಂಧಿ ಕೃಷಿ ವಿಜ್ಞಾನ ಕೇಂದ್ರ (ಜಿ.ಕೆ.ವಿ.ಕೆ.) ಬೆಂಗಳೂರು |

| | | | |
|---|---|---|---|
| | ಮುಖ್ಯಮಂತ್ರಿಗಳು,<br><br>ಕರ್ನಾಟಕ ಸರ್ಕಾರ.<br><br>ಅಧ್ಯಕ್ಷತೆ:<br><br>ಕೃಷ್ಣ ಭೈರೇಗೌಡ,<br><br>ಕೃಷಿ ಸಚಿವರು<br><br>ವಿ.ಸೂ.:<br><br>ಈ ಕಾರ್ಯಕ್ರಮಕ್ಕೆ ವಾಹನ ವ್ಯವಸ್ಥೆ ಮಾಡಲಾಗಿದ್ದು ವಾಹನವು ಅಂದು ಬೆಂಗಳೂರು ಪ್ರೆಸ್‌ಕ್ಲಬ್ ಆವರಣದಿಂದ ಬೆಳಿಗ್ಗೆ 10–15 ಗಂಟೆಗೆ ನಿಗದಿತ ಸ್ಥಳದತ್ತ ತೆರಳಲಿದೆ. | | |
| 3. | ಕೃಷಿ ಮೇಳ – 2015:<br><br>ಹಸಿರು ಕ್ರಾಂತೀಯ ಸುವರ್ಣ ಮಹೋತ್ಸವ ಅಂಗವಾಗಿ ತಾಂತ್ರಿಕ ಸಮಾವೇಶ:<br><br>ಸಮಾವೇಶದ ಉದ್ಘಾಟನೆ:<br><br>ಡಾ. ಜಿ. ಪರಮೇಶ್ವರ್,<br><br>ಗೃಹ ಸಚಿವರು.<br><br>ವಿಶೇಷ ಅತಿಥಿಗಳು:<br><br>ಪ್ರೊ. ಎಂ. ವಿ. ರಾಜೀವ್ ಗೌಡ,<br><br>ಲೋಕಸಭಾ ಸದಸ್ಯರು (ರಾಜ್ಯ ಸಭೆ)<br><br>ಕೆ.ಎಸ್. ಪುಟ್ಟಣ್ಣಯ್ಯ,<br><br>ವಿಧಾನಸಭಾ ಸದಸ್ಯರು,<br><br>ಮೇಲುಕೋಟೆ | 20–11–2015<br><br>ಶುಕ್ರವಾರ<br><br>ಮಧ್ಯಾಹ್ನ<br><br>2–30 ಗಂಟೆಗೆ | ಗಾಂಧಿ ಕೃಷಿ ವಿಜ್ಞಾನ ಕೇಂದ್ರ (ಜಿ.ಕೆ.ವಿ.ಕೆ.)<br>ಬೆಂಗಳೂರು |

| | | | |
|---|---|---|---|
| | ವಿ.ಸೂ.:<br>ಈ ಕಾರ್ಯಕ್ರಮಕ್ಕೆ ವಾಹನ ವ್ಯವಸ್ಥೆ ಮಾಡಲಾಗಿದ್ದು ವಾಹನವು ಅಂದು ಬೆಂಗಳೂರು ಪ್ರೆಸ್‌ಕ್ಲಬ್ ಆವರಣದಿಂದ ಮಧ್ಯಾಹ್ನ 1–15 ಗಂಟೆಗೆ ನಿಗದಿತ ಸ್ಥಳದತ್ತ ತೆರಳಲಿದೆ | | |
| 4. | <u>ಪತ್ರಿಕಾಗೋಷ್ಠಿ:</u><br>ಮ್ಯಾಪಿಂಗ್ ವಿತ್ ಫಿಗರ್ಸ್ ದಿ ಇವಾಲ್ವಿಂಗ್ ಆರ್ಟ್ ಆಫ್ ಕೆ. ಎಸ್. ರಾಧಾಕೃಷ್ಣನ್ ಕುರಿತಂತೆ. | 20–11–2015<br>ಶುಕ್ರವಾರ<br>ಸಂಜೆ<br>4–00 ಗಂಟೆಗೆ | ರಾಷ್ಟ್ರೀಯ ಆಧುನಿಕ ಕಲಾ ಸಂಗ್ರಹಾಲಯ, ನಂ 49, ಮಾಣಿಕ್ಯವೇಲು ಮ್ಯಾನ್ಷನ್, ಅರಮನೆ ರಸ್ತೆ, ಬೆಂಗಳೂರು – 560 052. |
| 5. | <u>ಕರ್ನಾಟಕ ಮಾಧ್ಯಮ ಅಕಾಡೆಮಿಯ ವಾರ್ಷಿಕ ಪ್ರಶಸ್ತಿ ಪ್ರದಾನ ಹಾಗೂ 30 ಪುಸ್ತಕಗಳ ಬಿಡುಗಡೆ ಸಮಾರಂಭ:</u><br><u>ಪ್ರಶಸ್ತಿ ಪ್ರದಾನ:</u><br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು,<br>ಕರ್ನಾಟಕ ಸರ್ಕಾರ.<br><u>ಅಧ್ಯಕ್ಷತೆ:</u><br>ಆರ್. ರೋಷನ್ ಬೇಗ್,<br>ಮೂಲಸೌಲಭ್ಯ ಅಭಿವೃದ್ಧಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಸಚಿವರು. | 20–11–2015<br>ಶುಕ್ರವಾರ<br>ಸಂಜೆ<br>5–00 ಗಂಟೆಗೆ | ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು. |

| | | | |
|---|---|---|---|
| | <u>ಪುಸ್ತಕಗಳ ಬಿಡುಗಡೆ:</u><br><br>ಡಾ. ಎಚ್. ಸಿ.ಮಹಾದೇವಪ್ಪ,<br><br>ಲೋಕೋಪಯೋಗಿ ಸಚಿವರು,<br><br><u>ಪ್ರಶಸ್ತಿ ಪುರಸ್ಕೃತರ ಪರಿಚಯ ಬಿಡುಗಡೆ:</u><br><br>ಕೆ.ಜೆ. ಜಾರ್ಜ್,<br><br>ಬೆಂಗಳೂರು ನಗರಾಭಿವೃದ್ಧಿ ಹಾಗೂ ಬೆಂಗಳೂರು ನಗರ ಉಸ್ತುವಾರಿ ಸಚಿವರು. | | |

ನಿರ್ದೇಶಕರ ಪರವಾಗಿ

## <u>ವಿಧಾನ ಮಂಡಲದಲ್ಲಿ ಇಂದು:</u>

# <u>ಕುಡಿಯಾ ಮತ್ತು ಮಲೆ ಕುಡಿಯರು ಪಂಗಡಗಳಿಗೆ ಸೌಲಭ್ಯ</u>

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ಕುಡಿಯಾ ಮತ್ತು ಮೇಲಕುಡಿ ಜಾತಿಗಳು, ಪರಿಶಿಷ್ಟ ಪಂಗಡಗಳ ಪಟ್ಟಿಯಲ್ಲಿ ಸೇರಿವೆ. ಇವರು ಕೊಡಗು ಜಿಲ್ಲೆಯಲ್ಲಿ ವಾಸವಾಗಿದ್ದು, ಕುಡಿಯ ಭಾಷೆ ಮಾತನಾಡುತ್ತಾರೆ. 2011 ರ ಜನಗಣತಿಯ ಪ್ರಕಾರ ಇವರ ಜನಸಂಖ್ಯೆ 2.69 ಇದೆ. ಇವರು ಹಿಂದೂಗಳು ಆಗಿರುತ್ತಾರೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ. ಬಿ. ಜಯಚಂದ್ರ ಅವರು ಸಮಾಜ ಕಲ್ಯಾಣ ಸಚಿವರ ಪರವಾಗಿ ಇಂದು ಪ್ರಶ್ನೋತ್ತರ ವೇಳೆಯಲ್ಲಿ ವಿಧಾನಸಭೆಗೆ ತಿಳಿಸಿದರು.

ಇಂದು ವಿಧಾನಸಭೆಯ ಪ್ರಶ್ನತೋತ್ತರ ವೇಳೆಯಲ್ಲಿ ಶಾಸಕ ಅಪ್ಪಚ್ಚು ರಂಜನ್ ಅವರ ಪ್ರಶ್ನೆಗೆ ಉತ್ತರಿಸುತ್ತಿದ್ದ ಸಚಿವರು ಮಲೆಕುಡಿಯವರು ಸಹ ಪರಿಶಿಷ್ಟ ಪಂಗಡಗಳ ಪಟ್ಟಿಯಲ್ಲಿ ಸೇರಿದ್ದಾರೆ. ಇವರು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಾಸವಾಗಿದ್ದು, ಕನ್ನಡ ಮತ್ತು ತುಳು ಭಾಷೆ ಮಾತನಾಡುತ್ತಾರೆ. ಜನಗಣತಿಯ ಪ್ರಕಾರ ಇವರ ಜನಸಂಖ್ಯೆ 9236 ಇದೆ. ಇವರು ಸಹ ಹಿಂದೂಗಳಾಗಿರುತ್ತಾರೆ ಎಂದು ಸಚಿವರು ತಿಳಿಸಿದರು.

ಕುಡಿಯ, ಮೇಲಕುಡಿ ಮತ್ತು ಮಲೆಕುಡಿ ಇವರು ಪರಿಶಿಷ್ಟ ಪಂಗಡಗಳ ಪಟ್ಟಿಯಲ್ಲಿ ಸೇರಿದ್ದು ಅದರಂತೆ ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಆದರೆ ಬೆಟ್ಟ ಕುರುಬರು, ಪರಿಶಿಷ್ಟ ಪಂಗಡಗಳ ಪಟ್ಟಿಯಲ್ಲಿ ಸೇರಿರುವುದಿಲ್ಲ ಮತ್ತು ಪರಿಶಿಷ್ಟ ಪಂಗಡದ ಸೌಲಭ್ಯಕ್ಕೆ ಅರ್ಹರಾಗಿರುವುದಿಲ್ಲ ಎಂದು ಸಚಿವರು ವಿಧಾನಸಭೆಗೆ ಮಾಹಿತಿ ನೀಡಿದರು.

ಬಾಬು:ಜಿಪಿಆರ್.

# ಅಕ್ರಮ ದಾಸ್ತಾನು ದಾಳಿ : 2.55 ಲಕ್ಷ ಕ್ವಿಂಟಾಲ್ ಬೇಳೆಕಾಳು ವಶ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಅಕ್ರಮ ದಾಸ್ತಾನು ಮಾಡಿರುವ ಮಳಿಗೆ, ಗೋಡೌನ್‌ಗಳ ಮೇಲೆ ನವೆಂಬರ್ 15 ರವರೆಗೆ 1351 ಅನಿರೀಕ್ಷಿತ ದಾಳಿಮಾಡಿ 228 ಪ್ರಕರಣ ದಾಖಲಿಸಿದ್ದು 255458.28 ಕ್ವಿಂಟಾಲ್ ಬೇಳೆಕಾಳುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಖಾತೆ ರಾಜ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಇಂದು ವಿಧಾನಸಭೆಯ ಪ್ರಶ್ನೋತ್ತರ ವೇಳೆಯಲ್ಲಿ ಚಿಕ್ಕಬಳ್ಳಾಪುರ ಶಾಸಕ ಡಾ. ಸುಧಾಕರ್ ಅವರ ಪ್ರಶ್ನೆಗೆ ಉತ್ತರಿಸುತ್ತಾ ತಿಳಿಸಿದರು.

ದೇಶಾದ್ಯಂತ ಬೇಳೆಕಾಳುಗಳು ಬೆಲೆ ದಿನದಿಂದ ದಿನಕ್ಕೆ ಏರಿಕೆ ಕಂಡು ಬಂದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ಅಗತ್ಯ ವಸ್ತುಗಳ ಕಾಯ್ದೆಯಡಿ ಕ್ರಮ ಕೈಗೊಳ್ಳಲು ರಾಜ್ಯ ಸರ್ಕಾರಗಳಿಗೆ ನಿರ್ದೇಶನ ನೀಡಿರುವುದರಿಂದ ಸೆಪ್ಟೆಂಬರ್ 5 ರಂದು ದಾಸ್ತಾನು ಮಿತಿ ಆದೇಶ ಹೊರಡಿಸಲಾಗಿದೆ. ಮುಟ್ಟುಗೋಲು ಹಾಕಲು ಸರ್ಕಾರವು ಯಾವುದೇ ನಿರೀಕ್ಷೆಯನ್ನು ಹಾಕಿಕೊಂಡಿರುವುದಿಲ್ಲ ಹಾಗೂ ಯಾವುದೇ ಗುರಿ ನಿಗದಿಪಡಿಸಿರುವುದಿಲ್ಲ. ಸರ್ಕಾರದ ಆದೇಶಗಳನ್ನು ಉಲ್ಲಂಘಿಸಿದ ಸಂಬಂಧದಲ್ಲಿ ವಶಪಡಿಸಿಕೊಂಡಿರುವ ಬೇಳೆಕಾಳುಗಳನ್ನು ಕೇಂದ್ರ ಸರ್ಕಾರದ ನಿರ್ದೇಶನದಂತೆ ವಿಲೇವಾರಿ ಮಾಡಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ದಾಳಿ ಆರಂಭಗೊಂಡ ನಂತರ ಬೇಳೆಕಾಳು ದರದಲ್ಲಿ ಗಣನೀಯ ಪ್ರಮಾಣದಲ್ಲಿ ಇಳಿಕೆಯಾಗಿದೆ ಎಂದು ಸಚಿವರು ಸಭೆಗೆ ತಿಳಿಸಿದರು.

ಬಾಬು:ಜಿಪಿಆರ್.

# ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಸರ್ಕಾರದ ನಿರಾಸಕ್ತಿ ಇಲ್ಲ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರವು ಪ್ರಾದೇಶಿಕ ಅಸಮತೋಲನ ನಿವಾರಣೆಗೆ ನಿರಾಸಕ್ತಿ ಹೊಂದಿರುವುದಿಲ್ಲ. ರಾಜ್ಯದಲ್ಲಿನ ಪ್ರಾದೇಶಿಕ ಅಸಮತೋಲನೆಯನ್ನು ಅಧ್ಯಯಿಸಿ ಅವುಗಳ ನಿವಾರಣೆಗೆ ಕಾರ್ಯತಂತ್ರವನ್ನು ಶಿಫಾರಸ್ಸು ಮಾಡಲು ಡಾ. ಡಿ.ಎಂ. ನಂಜುಂಡಪ್ಪ ಅವರ ನೇತೃತ್ವದಲ್ಲಿ ಕರ್ನಾಟಕ ಸರ್ಕಾರವು ಪ್ರಾದೇಶಕ ಅಸಮತೋಲನ ನಿವಾರಣಾ ಉನ್ನತಾಧಿಕಾರಿ ಸಮಿತಿಯನ್ನು ರಚಿಸಿತ್ತು ಎಂದು ಯೋಜನೆ ಮತ್ತು ಸಾಂಖ್ಯಿಕ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಎಸ್. ಆರ್. ಪಾಟೀಲ್ ಅವರು ಇಂದು ವಿಧಾನಸಭೆ ತಿಳಿಸಿದರು.

ರಾಜ್ಯ ವಿಧಾನಸಭೆಯ ಪ್ರಶ್ನೋತ್ತರ ವೇಳೆಯಲ್ಲಿ ಶಿಗ್ಗಾಂವ ಶಾಸಕ ಬಸವರಾಜ್ ಎಸ್. ಬೊಮ್ಮಾಯಿ ಅವರ ಪ್ರಶ್ನೆಗೆ ಉತ್ತರಿಸುತ್ತಿದ್ದ ಅವರು ಸಂಯುಕ್ತ ದು:ಸ್ಥಿತಿ ಸೂಚ್ಯಾಂಕವನ್ನು ಆಧರಿಸಿ ರಾಜ್ಯದ 114 ತಾಲ್ಲೂಕುಗಳನ್ನು ಅತ್ಯಂತ ಹಿಂದುಳಿದ, ಅತಿ ಹಿಂದುಳಿದ, ಹಿಂದುಳಿದ ಮತ್ತು ಸಾಪೇಕ್ಷವಾಗಿ ಅಭಿವೃದ್ಧಿ ಹೊಂದಿರುವ ತಾಲ್ಲೂಕುಗಳಾಗಿ ವರ್ಗೀಕೃತಗೊಳಿಸಿದೆ. ರಾಜ್ಯದಲ್ಲಿನ ಹಿಂದುಳಿದಿರುವಿಕೆಯ ವಾದಾಂಶವನ್ನು ಪರಿಹರಿಸಲು ರಾಜ್ಯವು 2007-08ನೇ ಸಾಲಿನಿಂದ ವಿಶೇಷ ಅಭಿವೃದ್ಧಿ ಯೋಜನೆಯನ್ನು 8 ವರ್ಷಗಳ ಅವಧಿಗೆ ಅನುಷ್ಠಾನಗೊಳಿಸಿದ್ದು, ಇದನ್ನು ಮುಂದಿನ 5 ವರ್ಷಗಳ ಅವಧಿಗೆ ವಿಸ್ತರಿಸಲು ಸರ್ಕಾರವು ನಿರ್ಧರಿಸಿರುತ್ತದೆ ಎಂದು ಸಚಿವರು ತಮ್ಮ ಉತ್ತರದಲ್ಲಿ ತಿಳಿಸಿದರು.

ಬಾಬು:ಜಿಪಿಆರ್.

## ರಾಜ್ಯದಲ್ಲಿ 102 ಕಾರಾಗೃಹಗಳಿವೆ – ಜಿ. ಪರಮೇಶ್ವರ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯದಲ್ಲಿ ಒಟ್ಟು 102 ಕಾರಾಗೃಹಗಳಿವೆ. ರಾಜ್ಯದ ಕಾರಾಗೃಹಗಳಲ್ಲಿ 13859 ಬಂದಿಗಳಿಗೆ ಸ್ಥಳಾವಕಾಶ ಕಲ್ಪಿಸಲಾಗಿದೆ ಮತ್ತು ಜೈಲುಗಳಲ್ಲಿ ನಡೆಯುತ್ತಿದೆ ಎನ್ನಲಾದ ಗಲಭೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಎಲ್ಲಾ ಜೈಲುಗಳಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸಲಾಗಿದೆ ಎಂದು ವಿಧಾನ ಪರಿಷತ್ತಿನಲ್ಲಿ, ಸದಸ್ಯ ಜಿ.ಎಸ್. ನ್ಯಾಮಗೌಡ ಅವರು ಕೇಳಿದ ಪ್ರಶ್ನೆಗೆ ಗೃಹ ಸಚಿವರು ಉತ್ತರಿಸಿದರು.

ಭೂಗತಪಾತಕಿಗಳ ಚಟುವಟಿಕೆಗಳನ್ನು ನಿಯಂತ್ರಿಸಲು ಮತ್ತು ಪ್ರಚೋಧನಕಾರಿ ಭಾಷಣ ಮಾಡುವವರ ಬಗ್ಗೆ ಕೈಗೊಂಡ ಕ್ರಮಗಳ ಬಗ್ಗೆ ವಿಧಾನ ಪರಿಷತ್ ಸದಸ್ಯ ಐವಾನ್ ಡಿಸೋಜ ಕೇಳಿದ ಪ್ರಶ್ನೆಗೆ ಉತ್ತರಿಸುತ್ತ ಭೂಗತ ಪಾತಕಿಗಳ ಮೇಲೆ ಗಂಭೀರವಾದ ಕೇಸುಗಳನ್ನು ದಾಖಲೆ ಮಾಡಿ ತನಿಖೆಗಳನ್ನು ನಡೆಸುತ್ತಿದ್ದೇವೆ.

ಖಂಡಿತವಾಗಿ ಯಾವುದೇ ಪ್ರಬಲ ವ್ಯಕ್ತಿಯಾಗಲಿ ನಮಗೆ ವ್ಯಕ್ತಿ ಮುಖ್ಯವಲ್ಲ ಸಮಾಜ ಮುಖ್ಯ: ಆದ್ದರಿಂದ ಖಂಡಿತವಾಗಿ ಕ್ರಮವನ್ನು ತೆಗೆದುಕೊಳ್ಳುತ್ತೇವೆ ಎಂದು ಸದನಕ್ಕೆ ತಿಳಿಸಿದರು.

ರಾಜ್ಯದಲ್ಲಿ ಕೋಮು ಗಲಭೆ ಹಾಗೂ ಅತ್ಯಾಚಾರ ಮತ್ತಿತರ ಪ್ರಕರಣಗಳಲ್ಲಿ ಸಂತ್ರಸ್ಥರಿಗೆ ಪರಿಹಾರ ವಿತರಿಸುವ ಕಾರ್ಯವು ವಿಳಂಬವಾಗುತ್ತಿರುವ ಸಂಬಂಧ ಪರಿಷತ್ ಸದಸಯ ಕವಟಗಿಮಠ ಮಹಂತೇಶ್ ಕೇಳಿದ ಪ್ರಶ್ನೆಗಳಿಗೆ ಗೃಹ ಸಚಿವರು ಉತ್ತರಿಸುತ್ತಾ "ಸಂತ್ರಸ್ಥರ ಪರಿಹಾರ ನಿಧಿ ಯೋಜನೆಯ ಪ್ರಕಾರ ಎರಡು ತಿಂಗಳೊಳಗಾಗಿ ಪರಿಹಾರ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ಸದಸ್ಯರ ಪ್ರಶ್ನೆಗೆ ಉತ್ತರಿಸಿದರು.

ಪಲ್ಲವಿ/ಕೆಪಿಪಿ/ಕೆವಿ/ಕೆಎಂ

## ಕಲಾವಿದರುಗಳಿಗೆ ಸೌಲಭ್ಯ ನೀಡಿಕೆ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ರಾಜ್ಯದ ಸಾಂಸ್ಕೃತಿಕ ಕ್ಷೇತ್ರದಲ್ಲಿ ಅಂದರೆ ಜಾನಪದ, ಯಕ್ಷಗಾನ, ಬಯಲಾಟ, ನಾಟಕ, ಸಂಗೀತ, ನೃತ್ಯ, ಸಾಹಿತ್ಯ, ಲಲಿತ ಕಲೆ, ಶಿಲ್ಪಕಲಾ ಕ್ಷೇತ್ರಗಳಲ್ಲಿ ಅನುಪಮ ಸೇವೆ ಸಲ್ಲಿಸಿ ಕಷ್ಟಪರಿಸ್ಥಿತಿಯಲ್ಲಿರುವ ಸಾಹಿತಿ ಮತ್ತು ಕಲಾವಿದರಿಗೆ ಮಾಸಿಕ ರೂ 1500/- ಗಳ ಮಾಸಾಶನ ನೀಡಲಾಗುತ್ತಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವೆ ಶ್ರೀಮತಿ ಉಮಾಶ್ರೀ ಅವರು ಇಂದು ವಿಧಾನಸಭೆಯಲ್ಲಿ ಶಾಸಕ ಸುಧಾಕರ್ ಲಾಲ್ ಪಿ.ಆರ್. ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಅಲ್ಲದೆ, ಕಷ್ಟ ಪರಿಸ್ಥಿತಿಯಲ್ಲಿರುವ ಸಾಹಿತಿ ಮತ್ತು ಕಲಾವಿದರು ಮಾಸಾಶನ ಪಡೆಯುತ್ತಿದ್ದು, ಮೃತಪಟ್ಟಲ್ಲಿ ಅವರ ಧರ್ಮಪತ್ನಿಯವರಿಗೆ ವಿಧವಾ ಮಾಸಾಶನ ನೀಡಲಾಗುತ್ತಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಒಟ್ಟು 29794 ಜನ ಅರ್ಹ ಸಾಹಿತಿ ಕಲಾವಿದರನ್ನು ಗುರುತಿಸಿ ಮಾಸಾಶನ ಮಂಜೂರು ಮಾಡಲಾಗಿದೆ ಎಂದು ಜಯನಗರ ಶಾಸಕ ಬಿ.ಎನ್. ವಿಜಯ್‌ಕುಮಾರ್ ಅವರ ಮತ್ತೊಂದು ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ಸಚಿವರು ತಿಳಿಸಿದ್ದಾರೆ.

ಬಾಬು:ಜಿಪಿಆರ್

## ರಾಜ್ಯದಲ್ಲಿ 64558 ಅಂಗನವಾಡಿ ಕೇಂದ್ರಗಳು

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ 3331 ಮಿನಿ ಅಂಗನವಾಡಿ ಕೇಂದ್ರಗಳು ಸೇರಿದಂತೆ ಒಟ್ಟು 64558 ಅಂಗನವಾಡಿ ಕೇಂದ್ರಗಳಿದ್ದು, ಇನ್ನು 788 ನೂತನ ಅಂಗನವಾಡಿ ಕೇಂದ್ರಗಳಿಗೆ ಬೇಡಿಕೆ ಇದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವೆ ಶ್ರೀಮತಿ ಉಮಾಶ್ರೀ ಅವರು ಇಂದು ವಿಧಾನಸಭೆಯಲ್ಲಿ ಶಾಸಕ ಎಂ.ಪಿ. ಅಪ್ಪಚ್ಚು ರಂಜನ್ ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ರಾಜ್ಯದಲ್ಲಿ 40228 ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡವಿದೆ. 32689 ಅಂಗನವಾಡಿಗಳಿಗೆ ಶೌಚಾಲಯ ಸೌಲಭ್ಯವಿದೆ. 32968 ಅಂಗನವಾಡಿಗಳಿಗೆ ನೀರಿನ ಸೌಕರ್ಯವಿದೆ. 24716 ಅಂಗನವಾಡಿಗಳಿಗೆ ವಿದ್ಯುತ್ ಸಂಪರ್ಕವಿದೆ. 37199 ಅಂಗನವಾಡಿಗಳಿಗೆ ಅಡಿಗೆ ಮನೆ ಸೌಲಭ್ಯವಿದೆ. 40609 ಅಂಗನವಾಡಿಗಳಿಗೆ ಗ್ಯಾಸ್ ಸಂಪರ್ಕವಿದೆ. ಉಳಿದ ಕೇಂದ್ರಗಳಿಗೆ ಆಯವ್ಯಯ ಲಭ್ಯತೆಯ ಆಧಾರದ ಮೇಲೆ ಮೂಲಭೂತ ಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ತಮ್ಮ ಲಿಖಿತ ಉತ್ತರದಲ್ಲಿ ತಿಳಿಸಿದರು.

ಬಾಬು:ಜಿಪಿಆರ್

# ತೋಟಗಾರಿಕೆ : ಸಹಾಯಧನ ನೀಡಿಕೆ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ತೋಟಗಾರಿಕೆ ಇಲಾಖೆಯ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ, ವಿವಿಧ ತೋಟಗಾರಿಕೆ ಚಟುವಟಿಕೆಗಳಿಗೆ ಸಹಾಯಧನ ನೀಡುತ್ತಿದೆ. ತೋಟಗಾರಿಕೆ, ಬೆಳೆಗಳ ಸಸ್ಯಾಗಾರಗಳ ಸ್ಥಾಪನೆ, ತರಕಾರಿ ಬೆಳೆಗಳ ಬೀಜೋತ್ಪಾದನೆ, ಅಂಗಾಂಶಕೃಷಿ ಘಟಕಗಳ ಸ್ಥಾಪನೆ, ಆಯ್ದ, ತೋಟಗಾರಿಕೆ ಬೆಳೆಗಳ ಹೊಸ ಪ್ರದೇಶ ವಿಸ್ತರಣೆ, ಸಮುದಾಯ. ವೈಯಕ್ತಿಕ ನೀರು ಸಂಗ್ರಹಣಾ ಘಟಕಗಳ ನಿರ್ಮಾಣ, ಸುರಕ್ಷಿತ ಬೇಸಾಯ ಕಾರ್ಯಕ್ರಮದಡಿ ಪಾಲಿಮನೆ, ನೆರಳು ಪರದೆ, ಮಲ್ಚಿಂಗ್, ಪಕ್ಷಿ ನಿರೋಧಕ ಬಲೆಗಳ ಖರೀದಿ, ತೋಟಗಾರಿಕೆಯಲ್ಲಿ ಯಾಂತ್ರೀಕರಣ ಮತ್ತು ತೋಟಗಾರಿಕೆ ಉತ್ಪನ್ನಗಳ ಮಾರುಕಟ್ಟೆಗಾಗಿ ಮೂಲಭೂತ ಸೌಕರ್ಯಗಳ ಸ್ಥಾಪನೆ, ಇತ್ಯಾದಿ, ಕಾರ್ಯಕ್ರಮಗಳಿಗೆ ಸಹಾಯಧನವನ್ನು ನೀಡಲಾಗುವುದು.

ಅಲ್ಲದೆ, ತೋಟಗಾರಿಕೆ ಬೆಳಗೆಗಳ ಕೊಯ್ಲೋತ್ತರ ನಿರ್ವಹಣೆಗಾಗಿ ರೈತರೊಂದಿಗೆ ಉದ್ದಿಮೆದಾರರಿಗೂ ಸಹ ಸಮಗ್ರ ಪ್ಯಾಕ್ ಹೌಸ್, ಪ್ರಾಥಮಿಕ ಸಂಸ್ಕರಣಾ ಘಟಕ, ಬಾಳೆ ಮತ್ತು ಮಾವು ಹಣ್ಣು ಮಾಗಿಸುವ ಘಟಕ, ಕೋಲ್ಡ್ ಸ್ಟೋರೇಜ್ ಹಾಗೂ ಶೀಥಲ ವಾಹನಗಳ ಖರೀದಿಗಾಗಿ ಸಹಾಯಧನವನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಮೀಪದ ತೋಟಗಾರಿಕೆ ಇಲಾಖೆ ಕಚೇರಿಯನ್ನು ಸಂಪರ್ಕಿಸಲು ತಿಳಿಸಿದೆ.

ಪಲ್ಲವಿ:ಬಾಬು:ಜಿಪಿಆರ್.

# ಫೆಲೋಶಿಪ್‌ಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ಕರ್ನಾಟಕ ಜಾನಪದ ಅಕಾಡೆಮಿಯಿಂದ ಾನಪದ ಕ್ಷೇತ್ರ ದಲ್ಲಿ ಹೆಚ್ಚಿನ ಸಂಶೋಧನೆ/ಅಧ್ಯಯನ ಮಾಡುವ ಸಲುವಾಗಿ ಕಲಾವಿದರೂ ಸೇರಿದಂತೆ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಅಧ್ಯಯನ ಅವಧಿಯು 8 ತಿಂಗಳುಗಳಾಗಿರುತ್ತದೆ.

ಅಕಾಡೆಮಿ ಸೂಚಿಸುವ ಈ ವಿಷಯಗಳ ಬಗ್ಗೆ ಅಧ್ಯಯನ ಮಾಡುವಂತವರು ವಿವರಗಳನ್ನು ದಿನಾಂಕ : 10-12-2015 ರೊಳಗೆ ಕಳುಹಿಸಿಕೊಡಬಹುದು.

ಅಧ್ಯಯನ ವಿಷಯಗಳು ಇಂತಿವೆ : ಜಾನಪದ ಸಂಸ್ಕೃತಿಯಲ್ಲಿನ ಕನ್ನಡ ಆಸ್ಥಿತ್ವತೆಯ ಅನನ್ಯತೆ ಜಾನಪದ ಕಲೆ ಮತ್ತು ಕಾಯಕ ಸಂಸ್ಕೃತಿಯ ಸಂಬಂಧದ ಸ್ವರೂಪ, ಜನಪದ ಮತ್ತು ರಾಷ್ಟ್ರೀಯವಾದದ ಪರಿಕಲ್ಪನೆ ಮತ್ತು ವೈರುದ್ಯಗಳ ಅಧ್ಯಯನ.

ಒಟ್ಟು ಫೆಲೋಶಿಫ್‌ಗಳ ಸಂಖ್ಯೆ 3 (ಮೂರು). ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು (ಅವರುಗಳು ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಬರಬೇಕು).

ಆಯ್ಕೆಯಾದ ಅಭ್ಯರ್ಥಿಗಳಿಗೆ ತಲಾ ರೂ. 90,000/- (ತೊಂಬತ್ತು ಸಾವಿರ ಮಾತ್ರ) ಗಳ ಸಂಶೋಧನಾ ನೆರವನ್ನು 3 ಕಂತುಗಳಲ್ಲಿ 30,000/- (ಮೂವತ್ತು ಸಾವಿರ) ದಂತೆ ಬಿಡುಗಡೆ ಮಾಡಲಾಗುವುದು. ಸಂಶೋಧಕರು ಯೋಜನೆಯ ಕೊನೆಗೆ ಸುಮಾರು 100 ಪುಟಗಳ ಡಿ.ಟಿ.ಪಿ. ಮಾಡಿದ ಹಸ್ತಪ್ರತಿಯನ್ನು ಹಾಗೂ ಇದಕ್ಕೆ ಸಂಬಂಧಿಸಿದ ವಿಷಯಗಳನ್ನು ಸಿ.ಡಿ.ಗೆ ಅಳವಡಿಸಿ, ಅಕಾಡೆಮಿಗೆ ಒಪ್ಪಿಸಬೇಕು.

ಹೆಚ್ಚಿನ ವಿವರ ಮತ್ತು ಅರ್ಜಿಗೆ ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ, 2ನೇಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು - 560 002, ದೂರವಾಣಿ 22215509 ಸಂಪರ್ಕಿಸುವುದು. ಅರ್ಜಿಗಳನ್ನು ಖುದ್ದಾಗಿ ಅಂಚೆ ಮೂಲಕವೂ ಪಡೆಯಬಹುದಾಗಿದೆ ಹಾಗೂ ಅರ್ಜಿಯನ್ನು ಆಯಾಯ ಜಿಲ್ಲೆಯ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯವರಿಂದ ಪಡೆಯಬಹುದಾಗಿದೆ.

ಪಲ್ಲವಿ:ಬಾಬು:ಜಿಪಿಆರ್.

## ಪತ್ರಿಕೋದ್ಯಮ ವೃತ್ತಿ ಕೌಶಲ್ಯ ತರಬೇತಿ
## ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2015-16ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ ಮುದ್ರಣ ಹಾಗೂ ವಿದ್ಯುನ್ಮಾನ

ಮಾಧ್ಯಮಗಳಲ್ಲಿ ವೃತ್ತಿ ರೂಪಿಸಿಕೊಳ್ಳಲು ಅನುಕೂಲವಾಗುವಂತೆ ವೃತ್ತಿ ಕೌಶಲ್ಯ ತರಬೇತಿ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಅರ್ಹರಿಂದ ಅರ್ಜಿಗಳನ್ನು ಆಹ್ವಾನಿಸಿದ್ದು ಅರ್ಜಿ ಸಲ್ಲಿಸಲು ಅವಧಿ ವಿಸ್ತರಿಸಲಾಗಿದೆ.

ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ, ಪತ್ರಿಕೋದ್ಯಮ/ ವಿದ್ಯುನ್ಮಾನ ಮಾಧ್ಯಮ/ ಸಮೂಹ ಸಂವಹನ ವಿಷಯಗಳಲ್ಲಿ ಪದವಿ/ಸ್ನಾತಕ ಪದವಿ/ ಪಿಜಿ ಡಿಪ್ಲೊಮಾ ಪಡೆದಿರುವ, ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಅಭ್ಯರ್ಥಿಯು ಈ ಹಿಂದೆ ಇದೇ ಸ್ವರೂಪದ ತರಬೇತಿಯನ್ನು ಸರ್ಕಾರದ ಯಾವುದೇ ಇಲಾಖೆಯಿಂದ ಪಡೆದಿರಬಾರದು.

ಅರ್ಜಿ ಸಲ್ಲಿಸಲು ಅವಧಿ ವಿಸ್ತರಿಸಲಾಗಿದ್ದು, ಅರ್ಜಿಯ ನಿಗದಿತ ನಮೂನೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕೃತ ವೆಬ್‌ಸೈಟ್ www.karnatakavarthe.org ನಿಂದ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ (ಪತ್ರಾಂಕಿತ ಅಧಿಕಾರಿಯ ದೃಢೀಕರಣದೊಂದಿಗೆ) ದಿನಾಂಕ 05-12-2015 ರೊಳಗಾಗಿ ಸಲ್ಲಿಸಬೇಕು. ಅಪೂರ್ಣ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಆಯ್ಕೆಯಾದ ಅಭ್ಯರ್ಥಿ ಮೂಲ ದಾಖಲೆಗಳ ಪರಿಶೀಲನೆಗೆ ಗೈರುಹಾಜರಾದಲ್ಲಿ ಮೆರಿಟ್ ಆಧಾರದ ಮೇಲೆ ಮುಂದಿನ ಅಭ್ಯರ್ಥಿಗೆ ಅವಕಾಶ ನೀಡಲಾಗುವುದು.

ತರಬೇತಿಯು ಒಟ್ಟು ಏಳು ದಿನಗಳದ್ದಾಗಿದ್ದು, ಪ್ರಾರಂಭದಲ್ಲಿ ಸಂಪನ್ಮೂಲ ಕಿಟ್ ನೀಡಲಾಗುವುದು. ತರಬೇತಿ ಸಂಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಸ್ಟೈಪೆಂಡ್, ತರಬೇತಿ ಪ್ರಮಾಣ ಪತ್ರ ಹಾಗೂ ಲ್ಯಾಪ್‌ಟಾಪ್ (ಪ.ಜಾ/ಪ.ಪಂ ದ ಅಭ್ಯರ್ಥಿಗಳಿಗೆ) ಹಾಗೂ ಡಿಜಿಟಲ್ ಕ್ಯಾಮೆರಾ (ಒಬಿಸಿ ಅಭ್ಯರ್ಥಿಗಳಿಗೆ) ನೀಡಲಾಗುವುದು.

ಭರ್ತಿ ಮಾಡಿದ ಅರ್ಜಿಗಳನ್ನು ಕಳುಹಿಸಬೇಕಾದ ವಿಳಾಸ 'ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾ ಸೌಧ, ಭಗವಾನ್ ಮಹಾವೀರ್ ರಸ್ತೆ, ಬೆಂಗಳೂರು- 560001' ಹಾಗೂ ಅರ್ಜಿ ಹಾಗೂ ದಾಖಲೆಗಳ ಸಾಫ್ಟ್ (ಸ್ಕ್ಯಾನ್) ಕಾಪಿಯನ್ನು scpinformationdepartment@gmail.com ಗೆ ಇ-ಮೇಲ್ ಮಾಡಲು ಕೋರಿದೆ.

## ರೈತರು ಹೊಸ ತಂತ್ರಜ್ಞಾನವನ್ನು ಕೃಷಿಯಲ್ಲಿ ಬಳಸುವಂತೆ ಕೃಷಿ ಸಚಿವ ಕೃಷ್ಣಭೈರೇಗೌಡ ಕರೆ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ರೈತರು ಹೊಸ ವೈಜ್ಞಾನಿಕ ವಿಧಿ ವಿಧಾನಗಳನ್ನು ಕೃಷಿಯಲ್ಲಿ ಅಳವಡಿಸಿ ಹೆಚ್ಚು ಉತ್ಪಾದನೆಗೆ ಒತ್ತು ನೀಡಬೇಕೆಂದು ಕೃಷಿ ಸಚಿವ ಕೃಷ್ಣ ಭೈರೇಗೌಡ ತಿಳಿಸಿದರು.

ಅವರು ಇಂದು ನಗರದ ಗಾಂಧಿ ಕೃಷಿ ವಿಜ್ಞಾನ ಕೇಂದ್ರ (ಜಿ.ಕೆ.ವಿ.ಕೆ.)ಯಲ್ಲಿ ಕೃಷಿ, ಜಲಾನಯನ, ತೋಟಗಾರಿಕೆ, ಅರಣ್ಯ, ರೇಷ್ಮೆ, ಪಶುಸಂಗೋಪನೆ, ಮೀನುಗಾರಿಕೆ, ಕೃಷಿ ಮಾರುಕಟ್ಟೆ, ಗ್ರಾಮೀಣಾಭಿವೃದ್ಧಿ,

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗಳ ಹಾಗೂ ಕರ್ನಾಟಕ ಹಾಲು ಮಹಾಮಂಡಳಿ ವತಿಯಿಂದ ನವೆಂಬರ್ 19 ರಿಂದ 22 ರವರೆಗೆ ಹಮ್ಮಿಕೊಳ್ಳಲಾಗಿರುವ ಕೃಷಿ ಮೇಳ –2015 ರ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ವರ್ಷ ದಕ್ಷಿಣ ಭಾಗದ ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಾಮರಾಜನಗರ, ಚಿತ್ರದುರ್ಗ ಮಂಡ್ಯ ಜಿಲ್ಲೆಗಳು ಬರದಿಂದ ತತ್ತರಿಸಿವೆ. ಉತ್ತರ ಭಾಗದ ಜಿಲ್ಲೆಗಳಲ್ಲೂ ಬರ ತಲೆದೋರಿದೆ. ಈ ಹತ್ತು ದಿನಗಳಲ್ಲಿ ಸುರಿದ ಹಿಂಗಾರು ಮಳೆಯಿಂದ ನೀರಿನ ಕೊರತೆ ಸ್ವಲ್ಪ ಮಟ್ಟಿಗೆ ನೀಗಿದರೂ ಮಳೆಯಿಂದ ಬೆಳೆ ನಾಶ ಕೂಡ ಸಂಭವಿಸಿದೆ ಎಂದರು.

ಮುಂದುವರೆದ ದೇಶಗಳು ಉತ್ಪಾದನೆ, ಉತ್ಪಾದಕತೆ ಎರಡಕ್ಕೂ ಒತ್ತು ನೀಡುತ್ತಿವೆ. ಈಗ ಸ್ವಯಂ ಚಾಲಿತ ಕಾರುಗಳು ಮಾರುಕಟ್ಟೆಗೆ ಬಂದಿದೆ. ಹಸಿರು ಮನೆಯಲ್ಲಿ ವಿದ್ಯುತ್ ದೀಪದ ಬಳಕೆಯನ್ನು ಕಂಡುಕೊಂಡಿದ್ದೇವೆ. ವಿಜ್ಞಾನ ತಂತ್ರಜ್ಞಾನದ ಹೊಸ ಆವಿಷ್ಕಾರಗಳಿಂದ ನಾವು ಸಮಸ್ಯೆಗಳನ್ನು ಬಗೆಹರಿಸಬೇಕು. ಹೊಸ ತಂತ್ರಜ್ಞಾನವನ್ನು ರೈತರಿಗೆ ತಲುಪಿಸಿ ಅವರು ಬಳಸುವಂತೆ ಮಾಡಬೇಕೆಂದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ರಾಜ್ಯಪಾಲರಾದ ವಾಜುಭಾಯಿ ರೂಢಾಬಾಯಿ ವಾಲಾ, ಜ್ಞಾನ ಮತ್ತು ತಂತ್ರಜ್ಞಾನ, ಇವರೆಡೂ ಕೃಷಿಕರನ್ನು ತಲುಪಬೇಕು. ದೇಶದಲ್ಲಿ ಶೇ. 65 ರಷ್ಟು ಜನ ಜೀವನೋಪಾಯಕ್ಕೆ ಕೃಷಿಯನ್ನು ಅವಲಂಭಿಸಿದ್ದಾರೆ. ಈಗ ಕೃಷಿಯನ್ನು ವಿವಿಧ ಕಂಪನಿಗಳು ಜಂಟಿ ಸಹಭಾಗಿತ್ವದಲ್ಲಿ ನಡೆಸುತ್ತಿದೆ. ಕರ್ನಾಟಕದಲ್ಲಿ ಕಾವೇರಿ, ತುಂಗಭದ್ರದಂತಹ ನದಿಗಳು ಹರಿದು ನೆಲದ ಸಿರಿಯನ್ನು ಹೆಚ್ಚಿಸಿದೆ. ಆದರೂ ರಾಜ್ಯಗಳ ನಡುವೆ ನೀರಿನ ಹಂಚಿಕೆ ವಿವಾದ ಬಗೆಹರಿದಿಲ್ಲ. ರೈತರು ಬೆಳೆ ನಷ್ಟದ ಬಗ್ಗೆ ಧೃತಿಗೆಡದೆ, ಯಾವ ಬೆಳೆಗೆ ಹೆಚ್ಚು ಬೇಡಿಕೆ, ಲಾಭ ದೊರೆಯುತ್ತದೆ, ಅಂತಹ ಬೆಳೆಯನ್ನು ಬೆಳೆಯುವುದು ಒಳಿತು. ಗಾಂಧಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಈ ನಾಲ್ಕು ದಿವಸಗಳ ಕೃಷಿ ಮೇಳದಲ್ಲಿ ಹೆಚ್ಚು ಜನರು ಭಾಗವಹಿಸಬೇಕೆಂದರು.

ಈ ಸಂದರ್ಭದಲ್ಲಿ ದಿವಂಗತ ಸಿ. ಭೈರೇಗೌಡ ರಾಜ್ಯ ಮಟ್ಟದ ರೈತ ಪ್ರಶಸ್ತಿಯನ್ನು ಹಾವೇರಿಯ ಹಾನಗಲ್ ತಾಲ್ಲೂಕಿನ ಕಾಮನಹಳ್ಳಿಯ ಪ್ರಗತಿ ರೈತ ಮುತ್ತಣ್ಣ ಬೀರಪ್ಪ ಪೂಜಾರ ಅವರಿಗೆ ಪ್ರದಾನ ಮಾಡಲಾಯಿತು. ಇವರು ಕುರಿ, ಮೇಕೆ ಸಾಕಾಣಿಕೆ, ಇತರ ಕೃಷಿ ಚಟುವಟಿಕೆಗಳಲ್ಲಿ ತೊಡಗಿಕೊಂಡಿದ್ದಾರೆ. ಡಾ: ಎಂ.ಎಚ್. ಮರೀಗೌಡ ರಾಜ್ಯಮಟ್ಟದ ತೋಟಗಾರಿಕಾ ರೈತ ಪ್ರಶಸ್ತಿಯನ್ನು ಹಾಸನ ಜಿಲ್ಲೆ ಸಕಲೇಶಪುರದ ಹಂಜುಗೋಡನಹಳ್ಳಿಯ ಕಾಫಿ ಬೆಳೆಗಾರರಾದ ಪ್ರಗತಿಪರ ರೈತ ಎಚ್.ಎಲ್. ನರೇಶ್ ಅವರಿಗೆ ಹಾಗೂ ಹಾವೇರಿಯ ಶಿಗ್ಗಾಂವ ಇಬ್ರಾಹಿಂಪುರದ ಪ್ರಗತಿಪರ ರೈತ ಸಿದ್ಧಲಿಂಗೇಶ್ವರ ವೀರಪ್ಪ ಕಲಿವಾಳ (ಅಡಿಕೆ, ತೆಂಗು ಬೆಳೆಗಾರರು) ಅವರಿಗೆ ಪ್ರದಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಕೃಷಿ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಡಾ: ಹೆಚ್. ಶಿವಣ್ಣ ಗಣ್ಯರನ್ನು ಸ್ವಾಗತಿಸಿದರು. ಶಾಸಕರು ಜಗಳೂರು ಹಾಗೂ ವಿಶ್ವವಿದ್ಯಾಲಯ ವ್ಯವಸ್ಥಾಪನಾ ಮಂಡಳಿ ಸದಸ್ಯರು ಕೃಷಿ ವಿಶ್ವವಿದ್ಯಾಲಯ ಎಚ್.ಪಿ. ರಾಜೇಶ್, ಕೃಷಿ ಇಲಾಖೆಯ ನಿರ್ದೇಶಕರಾದ ಡಾ: ಸಿ ಎನ್.ಸ್ವಾಮಿ ಕೃಷಿ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರಾದ ಡಾ: ಕೆ. ಜಗದೀಶ್ವರ ಉಪಸ್ಥಿತರಿದ್ದರು. ರಾಜ್ಯದ ವಿವಿದೆಡೆಯಿಂದ ಜನರು, ಕೃಷಿಕರು ಕೃಷಿಮೇಳಕ್ಕೆ ಬಂದು ಇಲ್ಲಿನ ವಿವಿಧ ಸ್ಟಾಲ್‌ಗಳನ್ನು ವೀಕ್ಷಿಸಿ ಮಾಹಿತಿ ಪಡೆದುಕೊಂಡರು.

ಪಲ್ಲವಿ/ಕವನ/ಕೆಎಂ

# ಸರ್ಕಾರಿ ನೌಕರರಿಗೆ ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಮತ್ತು ಮೈಸೂರಿನ ಭಾರತೀಯ ಭಾಷೆಗಳ ಕೇಂದ್ರ ಸಂಸ್ಥೆಯು ಒಟ್ಟಾಗಿ ನವೆಂಬರ್ 01, 1985 ರಿಂದ ಕರ್ನಾಟಕದಲ್ಲಿರುವ ಕನ್ನಡ ಬಾರದ ಎಲ್ಲಾ ಸರ್ಕಾರಿ ನೌಕರರಿಗಾಗಿ ಹನ್ನೆರಡು ತಿಂಗಳುಗಳ ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆಯೊಂದನ್ನು ನಡೆಸುತ್ತಿವೆ. ಇದಕ್ಕೆ ಕರ್ನಾಟಕದಲ್ಲಿರುವ ಎಲ್ಲಾ ನಗರಸಭೆ, ಕ.ವಿ.ಪ್ರ.ನಿ.ನಿ., ಕೆ.ಎಸ್.ಆರ್.ಟಿ.ಸಿ., ವಿಶ್ವವಿದ್ಯಾಲಯಗಳು, ಶಾಲಾ ಕಾಲೇಜುಗಳು ಮತ್ತಿತರ ಸರ್ಕಾರಿ ಅನುದಾನ ಪಡೆಯುವ ಸಂಸ್ಥೆಗಳ ನೌಕರರು ಮತ್ತು ಎಲ್ಲ ರಾಷ್ಟ್ರೀಕೃತ ಬ್ಯಾಂಕುಗಳ ನೌಕರರು ಸಹ ನೋಂದಾಯಿಸಿಕೊಳ್ಳಬಹುದು. ನೋಂದಣಿ ಉಚಿತವಾಗಿರುತ್ತದೆ.

ಕರ್ನಾಟಕದ ಸರ್ಕಾರಿ ನೌಕರರು ಸಂಪರ್ಕ ಶಿಬಿರ ಹಾಗೂ ಪರೀಕ್ಷೆಗಳಿಗೆ ಹಾಜರಾಗುವಾಗಿನ ಅವರ ಕಚೇರಿ ಗೈರು ಹಾಜರಿಯನ್ನು ಅನ್ಯಕಾರ್ಯ ನಿಮಿತ್ತ ಎಂದು ಪರಿಗಣಿಸಲಾಗುವುದು. ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆಗೆ ನೋಂದಾಯಿಸಿಕೊಂಡು ಉತ್ತೀರ್ಣರಾದವರಿಗೆ ಕರ್ನಾಟಕ ಲೋಕಸೇವಾ ಆಯೋಗದ ಕನ್ನಡ ಪರೀಕ್ಷೆಯಿಂದ ಕರ್ನಾಟಕ ಸರ್ಕಾರದ ಅಧಿಸೂಚನೆ ಸಿಆಸುಇ 30ಕೇಕೆವಿ:87 (1) ದಿನಾಂಕ 13ನೇ ಫೆಬ್ರವರಿ 1989 (ಕರ್ನಾಟಕ ರಾಜ್ಯಪತ್ರ ಭಾಗ–4, 2ಸಿ(1) ಮಾರ್ಚ್ 23, 1989 ಪುಟ 119) ರಲ್ಲಿ ತಿಳಿಸಿರುವಂತೆ ವಿನಾಯಿತಿಯಿದೆ.

ಈ ಯೋಜನೆಯನ್ನು ಈಗ ಸಾರ್ವಜನಿಕರಿಗೂ ವಿಸ್ತರಿಸಲಾಗಿದೆ. ಇವರು ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ವಯೋಮಿತಿ 18 ರಿಂದ 50 ವಯಸ್ಸಿನ ಒಳಗಿರಬೇಕು. ಆಸಕ್ತರು ಭರ್ತಿಮಾಡಿದ ಅರ್ಜಿಯ ಜೊತೆಯಲ್ಲಿ ರೂ 250/– ಡಿಮ್ಯಾಂಡ್ ಡ್ರಾಫ್ಟ್‌ನ್ನು ಕಳುಹಿಸಿ ಕೊಡಬೇಕು. ನೋಂದಣಿತರಿಗೆ ಇಪ್ಪತ್ತು ಪಾಠಾವಳಿಗಳನ್ನು ಕಳುಹಿಸಿಕೊಡಲಾಗುವುದು. ತರಬೇತಿ ಮತ್ತು ಸಂಪರ್ಕ ಶಿಬಿರದ ಅಂತ್ಯದಲ್ಲಿ ಪರೀಕ್ಷೆಗಳನ್ನು ನಡೆಸಲಾಗುವುದು.

ಮೂವತ್ತನೇಯ ತಂಡದ ತರಬೇತಿಯು ಡಿಸೆಂಬರ್ 2015 ರಿಂದ ಆರಂಭವಾಗುತ್ತದೆ. ಅರ್ಜಿ ನಮೂನೆ ಮತ್ತು ತರಬೇತಿ ವಿವರಗಳನ್ನು ಪ್ರಭಾರಿ ಅಧಿಕಾರಿ, ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆ, ಭಾರತೀಯ ಭಾಷೆಗಳ ಕೇಂದ್ರ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು – 570 006. ಇವರಿಗೆ ಐದು ರೂಪಾಯಿಯ

ಅಂಚೆ ಚೀಟಿಯನ್ನು ಹಚ್ಚಿದ ಸ್ವವಿಳಾಸ ಇರುವ ಲಕೋಟೆಯನ್ನು ಕಳುಹಿಸಿ ಪಡೆದುಕೊಳ್ಳಬಹುದು. ಭರ್ತಿ ಮಾಡಿದ ಅರ್ಜಿಗಳು ಪ್ರಭಾರಿ ಅಧಿಕಾರಿಯವರಿಗೆ ನವೆಂಬರ್ 30, 2015 ರೊಳಗೆ ತಲುಪಬೇಕು.

ಪಲ್ಲವಿ:ಬಾಬು:ಜಿಪಿಆರ್.

## COMPOSITE CORRESPONDENCE COURSE IN KANNADA

## (for the Government employees who do not know Kannada & Public)

Bangalore, November 19 (Karnataka Information)

**The Directorate of Kannada and Culture and the Central Institute of Indian Languages, Mysore are conducting a twelve month Composite Correspondence Course in Kannada since November 1, 1985 for the employees of the Government of Karnataka who do not know Kannada. This is also open to the employees of Boards and Corporations, such as KSRTC, KPTCL, Universities, Schools, Colleges and Institutes etc., aided by this course from the above registrants.**

**Their absence from office to attend the contact programmes and examination are treated as "on other duty" by the Government of Karnataka for its employees. As per the Karnataka Government Notification No. Siasui.39.sesevi. 87(1) dated13-2-1989 published in the Karnataka Gazette dated 23-3-189 page 119 those who register and pass in the Composite Correspondence Course in Kannada are exempted from passing the Kannada Language Examination of the K.P.S.C.**

**This Scheme has now been extended to the General Public. who wish to join the course. They should be within the age limit 18-50 years and should have passed the S.S.L.C. examination. They have to send a D.D. for Rs 250/-. with their application. They are provided with 20 elf instructional learning packets at regular intervals. The course and contact programme will be followed by an examination at the end.**

The course for the thirtieth batch is scheduled to commence from December 2015. the registration from and prospectus can be had by post from Office-in-charge. Composite Correspondence Course in Kannada, Central Institute of Indian Languages, Manasagangotri, Mysore-570 006 by sending self addressed stamped ( Rs 5.00) envelope. The duly completed application should reach the Officer-in-charge (CCCK) by November 2015.

pallavi:babu:gpr

# ಕರ್ನಾಟಕ ಮಾಧ್ಯಮ ಅಕಾಡೆಮಿ:

# ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ಕರ್ನಾಟಕ ಮಾಧ್ಯಮ ಅಕಾಡೆಮಿ ವತಿಯಿಂದ ನವೆಂಬರ್ 20 ರಂದು ಶುಕ್ರವಾರ ಸಂಜೆ 5–00 ಗಂಟೆಗೆ ವಿಧಾನಸೌಧ ಬ್ಯಾಂಕ್ವೆಟ್ ಹಾಲ್‌ನಲ್ಲಿ ವಾರ್ಷಿಕ ಪ್ರಶಸ್ತಿ ಪ್ರದಾನ ಹಾಗೂ ಪುಸ್ತಕಗಳ ಬಿಡುಗಡೆ ಸಮಾರಂಭವನ್ನು ಹಮ್ಮಿಕೊಂಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶಸ್ತಿಗಳ ಪ್ರದಾನ ಮಾಡಲಿದ್ದಾರೆ. ಸಮಾರಂಭದ ಅಧ್ಯಕ್ಷತೆಯನ್ನು ಮೂಲಸೌಕರ್ಯ, ಸಾರ್ವಜನಿಕ ಮತ್ತು ಸಂಪರ್ಕ ಹಾಗೂ ವಾರ್ತಾ ಸಚಿವ ಆರ್. ರೋಷನ್ ಬೇಗ್ ಅವರು ವಹಿಸಲಿದ್ದಾರೆ. ಪುಸ್ತಕಗಳ ಬಿಡುಗಡೆಯನ್ನು ಲೋಕೋಪಯೋಗಿ ಸಚಿವ ಎಚ್. ಸಿ. ಮಹದೇವಪ್ಪ ಅವರು ನೆರವೇರಿಸುವರು. ಬೆಂಗಳೂರು ನಗರಾಭಿವೃದ್ಧಿ ಹಾಗೂ ಬೆಂಗಳೂರು ನಗರ ಉಸ್ತುವಾರಿ ಸಚಿವ ಕೆ. ಜೆ. ಜಾರ್ಜ್ ಅವರು ಪ್ರಶಸ್ತಿ ಪುರಸ್ಕೃತರ ಪರಿಚಯ ಪುಸ್ತಿಕೆಯನ್ನು ಬಿಡುಗಡೆ ಮಾಡುವರು.

ಈ ಸಮಾರಂಭದಲ್ಲಿ ಸಮಾಜ ಕಲ್ಯಾಣ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್. ಆಂಜನೇಯ, ವಿಧಾನಸಭಾ ವಿರೋಧ ಪಕ್ಷದ ನಾಯಕ ಜಗದೀಶ್ ಶೆಟ್ಟರ್, ಲೋಕಸಭಾ ಸದಸ್ಯರು, ವಿಧಾನ ಪರಿಷತ್ ಸದಸ್ಯರು, ಮಹಾಪೌರರು, ಕನ್ನಡ ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಾ, ಎನ್. ಎಸ್. ಚನ್ನಪ್ಪಗೌಡ ಅವರು ಸೇರಿದಂತೆ ಇತರೆ ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕರ್ನಾಟಕ ಮಾಧ್ಯಮ ಅಕಾಡೆಮಿಯ 2015 ರ ವಿಶೇಷ ಪ್ರಶಸ್ತಿಯನ್ನು ಕೆ. ಸುಬ್ರಹ್ಮಣ್ಯ ಅವರಿಗೆ ನೀಡಲಾಗುವುದು. ಈ ಸಮಾರಂಭದಲ್ಲಿ 2015 ರ ವಾರ್ಷಿಕ ಪ್ರಶಸ್ತಿಗಳನ್ನು ರಾಜ್ಯಾದ್ಯಂತ ಒಟ್ಟು 30 ಪತ್ರಕರ್ತರಿಗೆ ನೀಡಲಾಗುವುದು.

ಪಲ್ಲವಿ:ಜಿಪಿಆರ್

## ಈ ವಾರದ ಬೆಳ್ಳಿಸಿನಿಮಾ-ಬೆಳ್ಳಿಮಾತು: " ಮುನ್ನೀಷ " ಚಲನಚಿತ್ರ ಪ್ರದರ್ಶನ, ಸಂವಾದ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ-ಬೆಳ್ಳಿಮಾತು ಕಾರ್ಯಕ್ರಮದಡಿ ನವೆಂಬರ್ 21 ರ ಶನಿವಾರದಂದು ಬೆಳ್ಳಿ ಸಿನಿಮಾ " ಮುನ್ನೀಷ " ಚಲನಚಿತ್ರ ಪ್ರದರ್ಶನವನ್ನು ಏರ್ಪಡಿಸಿದೆ. ಈ ಚಿತ್ರದ ನಿರ್ದೇಶಕ ಉಮಾಶಂಕರಸ್ವಾಮಿ ಅವರಿಂದ ಬೆಳ್ಳಿಮಾತು ಸಂವಾದ ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ನವೆಂಬರ್ 21 ರಂದು ಸಂಜೆ 4-00 ಗಂಟೆಗೆ ನಡೆಯುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಮುಖ್ಯ ಅತಿಥಿಗಳಾಗಿ ಚಿತ್ರದ ಸಿನಿಮಾಟೋಗ್ರಾಫರ್ ಜಿ. ಎಸ್. ಭಾಸ್ಕರ್ ಅವರು ಪಾಲ್ಗೊಳ್ಳುವರು ಎಂದು ಹೆಚ್. ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್‌ಬಿಡಿ:ಬಾಬು:ಕೆಎಂ.

## ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದಿಂದ ಬೃಹತ್ ರ್‍ಯಾಲಿ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗವು ವಿಶ್ವ ಮಕ್ಕಳ ದಿನಾಚರಣೆಯ ದಿನವಾದ ನವೆಂಬರ್ 20 ರಂದು ಮಕ್ಕಳ ಬೃಹತ್ ರ್‍ಯಾಲಿಯನ್ನು ಬೆಂಗಳೂರಿನಲ್ಲಿ ಆಯೋಜಿಸಿದೆ. ನವೆಂಬರ್ 20, 2015 ರಂದು ಬೆಳಿಗ್ಗೆ 9 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಕ್ಕಳ ರ್‍ಯಾಲಿಯನ್ನು ಬೆಂಗಳೂರಿನ ಕಬ್ಬನ್ ಪಾರ್ಕ್

ಕೇಂದ್ರ ಗ್ರಂಥಾಲಯದ ಬಳಿ ಉದ್ಘಾಟನೆ ಮಾಡಲಿದ್ದಾರೆ. ಮಕ್ಕಳ ಮೇಲಿನ ದೌರ್ಜನ್ಯ ತಡೆ, ಹಕ್ಕುಗಳ ರಕ್ಷಣೆ, ಸರ್ವರಿಗೂ ಶಿಕ್ಷಣ ಖಾತ್ರಿ ಮಾಡುವ ನಿಟ್ಟಿನಲ್ಲಿ ಹಲವು ಯೋಜನೆಗಳನ್ನು ಆಯೋಗ ಹಾಕಿಕೊಂಡಿದೆ. ಇವೆಲ್ಲದರ ಹಿನ್ನೆಲೆಯಲ್ಲಿ ಜನಜಾಗೃತಿ ಮೂಡಿಸುವ ಸಲುವಾಗಿ ಮಕ್ಕಳ ಬೃಹತ್ ರ್‍ಯಾಲಿಯನ್ನು ಆಯೋಜನೆ ಮಾಡಲಾಗಿದೆ. ರ್‍ಯಾಲಿಯಲ್ಲಿ ಬೆಂಗಳೂರು ಮತ್ತು ವಿವಿದೆಡೆಯ ಸುಮಾರು 10 ಸಾವಿರಕ್ಕೂ ಅಧಿಕ ಮಕ್ಕಳು ಸೇರಿದಂತೆ ಸಚಿವರು ಹಾಗೂ ಇತರೆ ಗಣ್ಯರು ರ್‍ಯಾಲಿಯಲ್ಲಿ ಭಾಗವಹಿಸಲಿದ್ದಾರೆ.

ರ್‍ಯಾಲಿಯಲ್ಲಿ ಮಕ್ಕಳ ಹಕ್ಕು ಮತ್ತು ರಕ್ಷಣೆ, ಶಿಕ್ಷಣಕ್ಕಾಗಿ ಹಲವು ರೀತಿಯಲ್ಲಿ ಕೆಲಸಗಳನ್ನು ಮಾಡುತ್ತಿರುವ ಮೈನಾ ಖ್ಯಾತಿಯ ಚಿತ್ರನಟ ಚೇತನ್ ಸಹ ಭಾಗವಹಿಸಲಿದ್ದಾರೆ.

ಉದ್ಘಾಟನೆಯ ಬಳಿಕ ಮಕ್ಕಳ ರ್‍ಯಾಲಿಯು ಕಬ್ಬನ್ ಪಾರ್ಕ್ ಕೇಂದ್ರ ಗ್ರಂಥಾಲಯದಿಂದ ಹೊರಟು ಕಂಠೀರವ ಸ್ಟೇಡಿಯಂ, ಎಂ. ಜಿ ರಸ್ತೆ, ಚಿನ್ನಸ್ವಾಮಿ ಕ್ರೀಡಾಂಗಣ, ರಾಜಭವನ ರಸ್ತೆಯ ಮೂಲಕ ಹಾದು ಕೇಂದ್ರ ಗ್ರಂಥಾಲಯಕ್ಕೆ ಹಿಂತಿರುಗಲಿದೆ.

ಮಕ್ಕಳ ಬೃಹತ್ ರ್‍ಯಾಲಿಯಲ್ಲಿ ಸರಕಾರದ ವಿವಿದ ಇಲಾಖೆಗಳು, ಸ್ವಯಂಸೇವಾ ಸಂಘಟನೆಗಳು, ಮಕ್ಕಳ ಹಕ್ಕು ಕಾರ್ಯಕರ್ತರು, ಹಲವು ಖಾಸಗಿ ಸಂಸ್ಥೆಗಳು ಸಹಭಾಗಿತ್ವವನ್ನು ಹೊಂದಿದೆ ಎಂದು ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷೆ ಡಾ ಕೃಪಾ ಆಳ್ವ ತಿಳಿಸಿದ್ದಾರೆ.

ಪಲ್ಲವಿ/ಬಾಬು/ಕೆಎಂ